## ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ.

## ಸಿ.ಸಿ.ನಂ. 36/2017

| | | |
|---|---|---|
| ಸಾಕ್ಷಿದಾರರ ಹೆಸರು | : | ಎಸ್ ಪಿ ಸುರೇಶನ್ |
| ತಂದೆಯ ಹೆಸರು | : | ಪುಟ್ಟೇಗೌಡ |
| ವಯಸ್ಸು | : | 67 ವರ್ಷ |
| ಉದ್ಯೋಗ | : | ನಿವೃತ್ತ ಆರಕ್ಷಕ ಉಪ–ನಿರೀಕ್ಷಕರು |
| ವಾಸಸ್ಥಳ | : | ನಂಜನಗೂಡು ಟೌನ್. |

**ಸಾಕ್ಷಿಯನ್ನು ದಿನಾಂಕಃ 12.02.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಎ.ಪಿ.ಪಿ. ರವರಿಂದಃ**

ನಾನು ದಿನಾಂಕ 26.11.2014 ರಿಂದ 16.08.2016 ರವರೆಗೆ ಹುಲ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಸಹಾಯಕ ಪೊಲೀಸ್ ಉಪ ನಿರೀಕ್ಷನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 25.06.2016 ರಂದು ನಾನು ಠಾಣಾ ಪ್ರಭಾರ ಕರ್ತವ್ಯದಲ್ಲಿದ್ದಾಗ ರಾತ್ರಿ 8.00 ಗಂಟೆ ಸಮಯದಲ್ಲಿ ಫ್ರಾಸಾ-1 ರವರು ಠಾಣೆಗೆ ಹಾಜರಾಗಿ ನಿ.ಪಿ-1 ರಂತೆ ಲಿಖಿತ ದೂರನ್ನು ನೀಡಿದ್ದು, ನಂತರ ಠಾಣಾ ಮೊಕದ್ದಮೆ ಸಂಖ್ಯೆ 138/2016 ರಂತೆ ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿ ನ್ಯಾಯಾಲಯಕ್ಕೆ ಮತ್ತು ನಮ್ಮ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು ನಿ.ಪಿ-1 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸಾಕ್ಷಿಯ ಸಹಿಯನ್ನು ನಿ.ಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಈಗ ನೋಡುತ್ತಿದ್ದೇನೆ. ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದರಿಂದ, ಪ್ರಥಮ

ವರ್ತಮಾನ ವರದಿಯನ್ನು ನಿ.ಪಿ-4 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ-4(ಎ) ಎಂದು ಗುರುತಿಸಲಾಯಿತು.

ದಿನಾಂಕ 26.06.2016 ರಂದು ಚಿಲ್ಕಹಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಫ್ರಾಸಾ-4 ರವರು ತೋರಿಸಿಕೊಟ್ಟಂತೆ ಪಂಚರ ಸಮಕ್ಷಮ ನಿಪಿ-2 ರಂತೆ ಮಹಜರ್ ಮಾಡಿ, ಮುದ್ದೆ ಮಾಲು-1 ಮತ್ತು 2 ನ್ನು ವಶಪಡಿಸಿಕೊಂಡಿರುತ್ತೇನೆ. ಸಾಕ್ಷಿಯು ನಿಪಿ-2 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ನಂತರ ಚಾಸಾ-1 ರವರ ಮರು ಹೇಳಿಕೆ, ಚಾಸಾ-2 ರಿಂದ 9 ರವರ ಹೇಳಿಕೆ ಪಡೆದು ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-14 ರವರಿಗೆ ವಹಿಸಿಕೊಟ್ಟಿರುತ್ತೇನೆ.

**<u>ಪಾಟೀ ಸವಾಲುಃ ಆರೋಪಿಗಳ ಪರ ಶ್ರೀ ಸಿ.ಎಲ್.ಬಿ, ವಕೀಲರಿಂದಃ</u>**

ದೂರನ್ನು ಯಾರು ಬರೆದುಕೊಟ್ಟಿದ್ದರು ಮತ್ತು ಎಲ್ಲಿ ಬರೆದುಕೊಂಡು ಬಂದಿದ್ದರು ಎಂದು ನನಗೆ ಗೊತ್ತಿಲ್ಲ, ಆದರೆ ಠಾಣೆಗೆ ಬಂದು ದೂರು ನೀಡಿರುತ್ತಾರೆ. ದೂರು ನೀಡಲು ರಾತ್ರಿ 8.00 ಗಂಟೆ ಸಮಯದಲ್ಲಿ ಫ್ರಾಸಾ-1 ಒಬ್ಬರೆ ಬಂದಿದ್ದರು. ನಾನು ಚಿಲಕಹಳ್ಳಿಗೆ ಹೋಗಿ ಯಾವುದೇ ಮಹಜರ್ ಮಾಡಿಲ್ಲ ಮತ್ತು ಏನನ್ನೂ ವಶಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಮಹಜರ್ ನ್ನು ಠಾಣೆಯಲ್ಲಿಯೆ ಕುಳಿತು ಸೃಷ್ಟಿಸಿದ್ದು, ಅದಕ್ಕೆ ಪಂಚರ ಸಹಿಯನ್ನು ಠಾಣೆಯಲ್ಲಿ ಪಡೆದಿರುತ್ತೇನೆ ಎಂದರೆ ಸರಿಯಲ್ಲ. ಫಿರ್ಯಾದುದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ದೂರು ಸೃಷ್ಟಿಸಿ, ಸುಳ್ಳು ಮಹಜರ್ ತಯಾರಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆ ಪಡೆದಿಲ್ಲ, ಅದೇ ರೀತಿ ಯಾವುದೇ ಸಾಕ್ಷಿದಾರರು ನನ್ನ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ</u>** ಇಲ್ಲ.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ಸಿವಿಲ್ ನಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**

**ನಂಜನಗೂಡು.**